# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST  ಇದು ಸುದ್ದಿ ವಿಳಾಸ  ಕನ್ನಡ ದಿನಪತ್ರಿಕೆ

ಹಾಸನ  E-mail : kannadapostnews@gmail.com  / ಕನ್ನಡ post  Price: ₹1

Vol.No.02 | Issue. 149 | Pages. 2 | Date: 19-05-2026, TUESDAY  RNI NO: KARKAN/2024/89601  Kannada Daily

ಸಂಪುಟ : 02 – ಸಂಚಿಕೆ : 149 – ಪುಟಗಳು : 2  19-05-2026  ಮಂಗಳವಾರ  Ph: 8762954248  ದರ : ₹1


# ಆಂತರಿಕ ದೂರು ನಿವಾರಣಾ ಸಮಿತಿ ರಚಿಸದಿದ್ದರೆ ದಂಡ

## ವಿದ್ಯಾ ಸಂಸ್ಥೆಗಳಿಗೆ ಜಿಲ್ಲಾಧಿಕಾರಿ ಎಚ್ಚರಿಕೆ | ತಕ್ಷಣ ಕ್ರಮಕ್ಕೆ ಅಧಿಕಾರಿಗಳಿಗೆ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿದ್ಯಾ ಸಂಸ್ಥೆಗಳಲ್ಲಿ ಮೂರು ವರ್ಷಗಳಿಂದ ಮಹಿಳಾ ದೌರ್ಜನ್ಯ ತಡೆಗೆ ಆಂತರಿಕ ದೂರು ನಿವಾರಣಾ ಸಮಿತಿ ರಚಿಸದೆ ಇರುವವರಿಗೆ 50 ಸಾವಿರ ರೂ. ದಂಡ ವಿಧಿಸುವಂತೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಹೆಣ್ಣು ಮಕ್ಕಳ ಸುರಕ್ಷತೆಗೆ ಆದ್ಯತೆ ನೀಡಬೇಕೆಂದು ಎಷ್ಟೇ ಹೇಳಿದರೂ ಅರ್ಥ ಮಾಡಿಕೊಳ್ಳುತ್ತಿಲ್ಲ. ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಲು ಹಿಂದೇಟು ಹಾಕಬಾರದು ಎಂದು ಖಡಕ್ ಸೂಚನೆ ನೀಡಿದರು.

ಲಿಂಗತ್ವ ಅಲ್ಪಸಂಖ್ಯಾತರಿಗೆ ಇರುವ ಕೌಶಲ ಆಧಾರಿಸಿ ಕೆಲಸ ಮಾಡಲು ಉದ್ಯೋಗಿನಿ ಯೋಜನೆಯಡಿ ಬ್ಯಾಂಕ್ ಮೂಲಕ ಸಾಲ ಸೌಲಭ್ಯ ಒದಗಿಸಬೇಕು. ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ ನಿವೇಶನ ಗುರುತಿಸಬೇಕು. ನಗರ ಪ್ರದೇಶಗಳಲ್ಲಿ ನಿವೇಶನ ಗುರುತಿಸಿ ನೀಡಲು ಯೋಜನಾ ನಿರ್ದೇಶಕರಿಗೆ ನಿರ್ದೇಶನ ನೀಡಿದರು.

ಶಕ್ತಿ ಸದನಕ್ಕೆ ದಾಖಲಾದ ಮಹಿಳೆಯರ ಆರೋಗ್ಯ ತಪಾಸಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಮಾನವ ಹಕ್ಕು ಮತ್ತು ಮಹಿಳೆಯರ ಹಕ್ಕುಗಳು ಉಲ್ಲಂಘನೆ ಆಗದಂತೆ ನಿಗಾ ವಹಿಸಿ ಅಸುರಕ್ಷಿತ ಹೆಣ್ಣು ಮಕ್ಕಳ ರಕ್ಷಣೆಗೆ ಒತ್ತು ನೀಡಬೇಕು. ನಿರಾಶ್ರಿತರು ರಸ್ತೆ ಬದಿ, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಸೇತುವೆ, ಪಾರ್ಕ್‌ಗಳಲ್ಲಿ ಮಲಗಬಾರದು. ಬೀದಿಯಲ್ಲಿ ಮಾನಸಿಕ ಅಸ್ವಸ್ಥ ಹೆಣ್ಣು ಮಕ್ಕಳು ಓಡಾಡುತ್ತಿರುವವರನ್ನು



ಗುರುತಿಸಿ ನಿರಾಶ್ರಿತರ ಕೇಂದ್ರದಲ್ಲಿ ತಂಗಲು ಅವಕಾಶ ಕಲ್ಪಿಸಬೇಕು. ಯಾವುದೇ ಮಗು ಎಲ್ಲೆ ಸಿಕ್ಕರೂ ಹತ್ತಿರದ ಪೊಲೀಸ್ ಠಾಣೆಗೆ ನೀಡಬೇಕು ಎಂದು ಹೇಳಿದರು.

ಹೆಣ್ಣು ಮಕ್ಕಳು ಧೈರ್ಯದಿಂದ ದುಡಿದು ಜೀವನ ನಡೆಸಬೇಕು. ಸ್ವಾವಲಂಬಿ ಜೀವನದಿಂದ ಇತರರಿಗೆ ಮಾದರಿಯಾಗಬೇಕು. ಸಂಕಷ್ಟಕ್ಕೆ ಒಳಗಾದ ಹೆಣ್ಣು ಮಕ್ಕಳಿಗೆ ವಿದ್ಯಾಭ್ಯಾಸ ಒದಗಿಸುವುದರ ಜೊತೆಗೆ ಕೌಶಲ ತರಬೇತಿ ನೀಡಿ ಉತ್ತೇಜನ ನೀಡುವುದರ ಮೂಲಕ ಸ್ವಂತ ಕೆಲಸ ಮಾಡಲು ಪ್ರೇರಣೆ ನೀಡಬೇಕೆಂದರು.

ವರದಕ್ಷಿಣೆ, ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರ ಹಾಗು ಲೈಂಗಿಕ ಕಿರುಕುಳಕ್ಕೆ ಒಳಗಾದ ಮಹಿಳೆಯರಿಗೆ ಸಹಾಯ ಒದಗಿಸಲು ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ತೆರೆಯಲಾದ ಸಾಂತ್ವನ ಕೇಂದ್ರದಲ್ಲಿ ಆಶ್ರಯ ಒದಗಿಸಿ ಅವರು ಸ್ವಾವಲಂಬಿಯಾಗಿ ಜೀವನ ನಡೆಸಲು ತರಬೇತಿ ಕಲ್ಪಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಮಹಿಳೆಯರು ಮತ್ತು ಮಕ್ಕಳ ಸಾಗಾಣಿಕೆ ತಡೆಗೆ ಸೂಕ್ತ ಕ್ರಮ ಕೈಗೊಳ್ಳಬೇಕು. ಗ್ರಾಮೀಣ ಭಾಗದಲ್ಲಿ ಕಾವಲು ಸಮಿತಿಗಳು ಪರಿಣಾಮಕಾರಿಯಾಗಿ ಕೆಲಸ ಮಾಡಿದರೆ ಬಾಲ್ಯ ವಿವಾಹ, ಪೋಕ್ಸೋ ಪ್ರಕರಣ ತಡೆಗಟ್ಟಲು ನೆರವಾಗುತ್ತದೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ನಿಗಾ ವಹಿಸಬೇಕೆಂದು ತಿಳಿಸಿದರು.

ಅಪೌಷ್ಟಿಕ ಮಕ್ಕಳು ಮತ್ತು ತೀವ್ರ ಅಪೌಷ್ಟಿಕತೆಯಿಂದ ಬಳಲುವ ಮಕ್ಕಳಿಗೆ ಹೆಚ್ಚಿನ ಒತ್ತು ನೀಡಿ ಆರೋಗ್ಯ ಸುಧಾರಣೆಯಾಗಿ ಸಾಮಾನ್ಯ ಸ್ಥಿತಿಗೆ ತರಲು ನಿಗಾ ವಹಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಚೇತನಾ ಯೋಜನೆಯಡಿ ಲೈಂಗಿಕ ವೃತ್ತಿನಿರತ ಮಹಿಳೆಯರು ಸ್ವಯಂ ಉದ್ಯೋಗ ಕೈಗೊಂಡು ಸಮಾಜದಲ್ಲಿ ಗೌರವಯುತ ಜೀವನ ನಡೆಸಲು 30 ಸಾವಿರ ರೂ. ಪ್ರೋತ್ಸಾಹ ಧನ ನೀಡಲಾಗುತ್ತದೆ. ಆರೋಗ್ಯ ಸಮಸ್ಯೆ, ವಯೋಮಾನ ಆಧಾರಿತವಾಗಿ ಮೊದಲ ಆದ್ಯತೆ ನೀಡಿ ಪ್ರೋತ್ಸಾಹ ಧನ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

### ಬಾಲ್ಯ ವಿವಾಹ ತೊಲಗಲಿ: ಡಿಸಿ

**ಸುರಕ್ಷಿತ ಸಮಾಜ ನಮ್ಮದಾಗಬೇಕೆಂದರೆ ಬಾಲ್ಯ ವಿವಾಹ, ಪೋಕ್ಸೋದಂತಹ ಕಾನೂನು ಬಾಹಿರ ಚಟುವಟಿಕೆಗಳಿಗೆ ಸಂಪೂರ್ಣ ಕಡಿವಾಣ ಹಾಕಬೇಕು. ಆ ನಿಟ್ಟಿನಲ್ಲಿ ಸಾರ್ವಜನಿಕರು ಜವಾಬ್ದಾರಿ ನಿಭಾಯಿಸಬೇಕೆಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.**

**ಸಂಕಷ್ಟಕ್ಕೆ ಸಿಲುಕಿದ ಹೆಣ್ಣು ಮಕ್ಕಳು 181 ಸಹಾಯವಾಣಿಗೆ ಕರೆ ಮಾಡಿದರೆ ಸಹಾಯ ದೊರಕಬೇಕು. ಈ ನಿಟ್ಟಿನಲ್ಲಿ ಸಹಾಯವಾಣಿ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿ ಜಾಗರೂಕರಾಗಿರಬೇಕು. ಸಂತ್ರಸ್ತರು ಕರೆ ಮಾಡಿದಾಗ ಹೇಗೆ ಸ್ಪಂದಿಸಬೇಕೆಂಬ ಕುರಿತು ತರಬೇತಿ ನೀಡಬೇಕು ಎಂದರು.**

ಜಿಲ್ಲೆಯಲ್ಲಿರುವ 29 ಲಿಂಗತ್ವ ಅಲ್ಪ ಸಂಖ್ಯಾತರಿಗೆ ಪಡಿತರ ಚೀಟಿಯನ್ನು ನೀಡಿ ಮೈತ್ರಿ ಯೋಜನೆಯಡಿ ಸೌಲಭ್ಯ ಒದಗಿಸಲು ಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿವೇಶನ ಒದಗಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಡಿವೈಎಸ್‌ಪಿ ಗಂಗಾಧರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಧರಣಿ ಕುಮಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅನಿಲ್, ಸಮಿತಿ ಸದಸ್ಯರಾದ ರೂಪ ಹಾಸನ, ಕೆ.ಟಿ.ಜಯಶ್ರೀ ಮತ್ತಿತರರಿದ್ದರು.

# ಮರು ಮೌಲ್ಯಮಾಪನದಲ್ಲಿ ನವಮಿಗೆ 622 ಅಂಕ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮರು ಮೌಲ್ಯಮಾಪನ ಫಲಿತಾಂಶದಲ್ಲಿ ರಾಜ್ಯಕ್ಕೆ ನಾಲ್ಕನೇ ಸ್ಥಾನ ಪಡೆದ ಪಟ್ಟಣದ ರೋಟರಿ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿನಿ ಎಸ್.ಎಸ್. ನವಮಿ ಅವರಿಗೆ ಶಾಸಕ ಸಿಮೆಂಟ್ ಮಂಜು ಅಭಿನಂದನೆ ಸಲ್ಲಿಸಿದರು.

ಪತ್ರಕರ್ತ ಎಸ್.ಎಲ್.ಸುಧೀರ್ ಹಾಗೂ ಶಿಕ್ಷಕಿ ಜಿ.ಎನ್. ಮೇಘ ದಂಪತಿ ಪುತ್ರಿಯಾಗಿರುವ ನವಮಿ, ಆರಂಭಿಕ ಫಲಿತಾಂಶದಲ್ಲಿ 618 ಅಂಕಗಳನ್ನು ಪಡೆದು ತಾಲೂಕಿಗೆ ದ್ವಿತೀಯ ಸ್ಥಾನ ಪಡೆದಿದ್ದಳು. ಬಳಿಕ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ್ದ ಹಿನ್ನೆಲೆ ಇದೀಗ 622 ಅಂಕಗಳನ್ನು ಗಳಿಸಿ ತಾಲೂಕಿಗೆ ಪ್ರಥಮ ಸ್ಥಾನ ಹಾಗೂ ರಾಜ್ಯ ಮತ್ತು ಜಿಲ್ಲಾಮಟ್ಟದಲ್ಲಿ ನಾಲ್ಕನೇ ಸ್ಥಾನ ಪಡೆದು ಗಮನ ಸೆಳೆದಿದ್ದಾಳೆ.

ಕಳೆದ ಏಪ್ರಿಲ್ 23ರಂದು ಪ್ರಕಟವಾದ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ನಾಲ್ಕು ಅಂಕಗಳ ಹೆಚ್ಚಳದೊಂದಿಗೆ ಮರು ಮೌಲ್ಯಮಾಪನದಲ್ಲಿ ಸಾಧನೆ ಮೆರೆದಿರುವ ನವಮಿ, ಯಾವುದೇ ಖಾಸಗಿ ಟ್ಯೂಷನ್‌ಗೆ ತೆರಳದೆ ಶಾಲೆಯಲ್ಲಿಯೇ ಪಾಠ ಆಲಿಸಿ ಪರಿಶ್ರಮದ ಮೂಲಕ ಈ ಸಾಧನೆ ಮಾಡಿರುವುದು ವಿಶೇಷವಾಗಿದೆ.

ವಿದ್ಯಾರ್ಥಿನಿಯ ಮನೆಗೆ ಭೇಟಿ ನೀಡಿದ ಶಾಸಕ ಸಿಮೆಂಟ್ ಮಂಜು, ನವಮಿಗೆ ಅಭಿನಂದನೆ ಸಲ್ಲಿಸಿ ಮುಂದಿನ ವಿದ್ಯಾಭ್ಯಾಸದಲ್ಲಿಯೂ ಇದೇ ರೀತಿ ಸಾಧನೆ ಮುಂದುವರಿಸಿ ತಾಲೂಕಿಗೆ ಮತ್ತಷ್ಟು ಕೀರ್ತಿ ತಂದುಕೊಡಲಿ ಎಂದು ಶುಭ ಹಾರೈಸಿದರು.

# ಅರಣ್ಯ ರಕ್ಷಣೆಗೆ ಇಲಾಖೆಗೆ ಆಸಕ್ತಿ ಇಲ್ಲ: ವೆಂಕಟೇಶ್‌ಮೂರ್ತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅರಣ್ಯ ಇಲಾಖೆಗೆ ಅರಣ್ಯ ಸಂರಕ್ಷಣೆಯ ಕಾಳಜಿ ಇಲ್ಲವಾಗಿದೆ ಎಂದು ಹಸಿರುಭೂಮಿ ಪ್ರತಿಷ್ಠಾನದ ಮುಖಂಡ ಆರ್.ಪಿ.ವೆಂಕಟೇಶ್ ಮೂರ್ತಿ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಜಿಲ್ಲಾದ್ಯಂತ 5 ಲಕ್ಷ ಸಸಿಗಳ ನೆಟ್ಟು ಹಸಿರು ಹಾಸನದ ಸಂಕಲ್ಪ ಹಾಕಿಕೊಂಡಿದ್ದಾರೆ. ವಾಸ್ತವವಾಗಿ ಅಷ್ಟು ಸಸಿಗಳು ಅರಣ್ಯ ಇಲಾಖೆಯಲ್ಲಿ ಇಲ್ಲವೆಂದು ಹಸಿರೀಕರಣಕ್ಕಾಗಿ ಜಿಲ್ಲಾಡಳಿತ ಕೇಳುತ್ತಿರುವ ಸಸಿಗಳು ಲಭ್ಯವಿಲ್ಲವೆಂದು ಅರಣ್ಯ ಇಲಾಖೆ ಅಧಿಕಾರಿಗಳು ಪತ್ರ ಬರೆದಿದ್ದಾರೆ. ಇಂತಹ ದುಸ್ಥಿತಿಗೆ ಕಾರಣ ಕೇಳಿದರೆ ಸಸಿಗಳನ್ನು ಬೆಳೆಸಲು ಅನುದಾನ ಇಲ್ಲ ಎಂಬ ಉತ್ತರ ಬಂದಿದೆ. ಅರಣ್ಯ




ಬೆಳೆಸಲು ಹಣಕಾಸು ನೀಡದ ಸರ್ಕಾರ, ಸಚಿವರು ಏಕೆ ಬೇಕು, ಸರ್ಕಾರಕ್ಕೆ ಇಂತಹ ದುಸ್ಥಿತಿ ಬಂದಿದೆಯೇ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇಷ್ಟಾದರೂ ಅರಣ್ಯ ಸಚಿವರು ಈ ಬಗ್ಗೆ ಗಮನ ಹರಿಸದೇ ಇರುವುದು ಬೇಸರ ತರಿಸಿದೆ. ಪ್ರಸಕ್ತ ವರ್ಷ ಹಸಿರೀಕರಣಕ್ಕೆ ಅಗತ್ಯವಾದ ಸಸಿಗಳನ್ನು ಬೇರೆ ರಾಜ್ಯದಿಂದಲಾದರೂ ತರಿಸಲು ತಕ್ಷಣ ಕ್ರಮ ಕೈಗೊಳ್ಳಬೇಕು. ಮುಂದಿನ ವರ್ಷ ಪ್ರಮಾದ ಮರುಕಳಿಸಿದಂತೆ ಎಚ್ಚರ ವಹಿಸಬೇಕೆಂದರು.

ತೀವ್ರ ತಾಪಮಾನ ಹೆಚ್ಚುತ್ತಿರುವ ಪ್ರಪಂಚದ ನೂರು ನಗರಗಳಲ್ಲಿ 90 ನಗರಗಳು ಭಾರತದಲ್ಲಿವೆ ಎಂದು ಪರಿಸರ ತಜ್ಞರು ಎಚ್ಚರಿಸಿದ್ದಾರೆ. ಆದರೂ ಅರಣ್ಯ ವೃದ್ಧಿಗೆ ಕ್ರಮ ವಹಿಸದೇ ಇರುವುದು ನೋವು ತರಿಸಿದೆ. ಜಿಲ್ಲಾಡಳಿತ ಆರಂಭಿಸಿರುವ ಹಸಿರೀಕರಣ ಆಂದೋಲನದಲ್ಲಿ ಪ್ರತಿಯೊಬ್ಬರೂ ಒಂದೊಂದು ಗಿಡ ನೆಡುವ ಮೂಲಕ ಕೈಜೋಡಿಸಬೇಕೆಂದು ಮನವಿ ಮಾಡಿದರು.

ಗ್ಯಾರಂಟಿ ಯೋಜನೆಗಾಗಿ ಮೂರು ವರ್ಷದಲ್ಲಿ 1.20 ಲಕ್ಷ ಕೋಟಿ ರೂ. ವ್ಯಯಿಸಿರುವ ಸರ್ಕಾರ ಸ್ವಲ್ಪ ಹಣವನ್ನಾದರೂ ಅರಣ್ಯ ಸಂರಕ್ಷಣೆಗೆ ಬಳಸಬೇಕಿತ್ತು. ಉಚಿತ ಯೋಜನೆಗಳ ಬದಲು ದುಡಿಯುವ ಕೈಗಳಿಗೆ ಕೆಲಸ ಕೊಟ್ಟರೆ ಅನುಕೂಲವಾಗುತ್ತದೆಂದರು.

ಹಸಿರುಭೂಮಿ ಪ್ರತಿಷ್ಠಾನ ಉಪಾಧ್ಯಕ್ಷ ಪಿ.ಪುರುಷೋತ್ತಮ್ ಮಾತನಾಡಿ, ನಗರದ ಚನ್ನಪಟ್ಟಣ ಹೌಸಿಂಗ್ ಬೋರ್ಡ್ ಕಾಲೋನಿಯಲ್ಲಿ 5 ಸಾವಿರ ಸಸಿಗಳನ್ನು ನೆಡುವ ಗುರಿ ಹಾಕಿಕೊಂಡಿದ್ದು ಶೀಘ್ರದಲ್ಲೇ ಕೆಲಸ ಪ್ರಾರಂಭವಾಗಲಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಎಂ.ಬಿ.ಗಿರಿಜಾಂಬಿಕ, ಎಂ.ಆರ್. ಚಂದ್ರಶೇಖರ್ ಇದ್ದರು.

# ದೇವೇಗೌಡರ 30 ಅಡಿ ಎತ್ತರದ ಕಟೌಟ್‌ಗೆ ಕ್ಷೀರಾಭಿಷೇಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಎನ್.ಆರ್. ವೃತ್ತದಲ್ಲಿ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರ 30 ಅಡಿ ಎತ್ತರದ ಕಟೌಟ್‌ಗೆ ಕ್ಷೀರಾಭಿಷೇಕ ಹಾಗೂ ಪುಷ್ಪಾರ್ಚನೆ ಮೂಲಕ 94ನೇ ಹುಟ್ಟುಹಬ್ಬವನ್ನು ಜೆಡಿಎಸ್ ಕಾರ್ಯಕರ್ತರು ಆಚರಿಸಿದರು.

ನಗರದ ನೀರುಬಾಗಿಲು ಆಂಜನೇಯ ಸ್ವಾಮಿ ದೇವಾಲಯದಲ್ಲಿ ದೇವೇಗೌಡರ ಹೆಸರಿನಲ್ಲಿ ಅರ್ಚನೆ ಹಾಗೂ ವಿಶೇಷ ಪೂಜೆ ಮಾಡಿಸಲಾಯಿತು. ಈ ವೇಳೆ ನೂರಾರು ಈಡುಗಾಯಿ ಒಡೆದು ದೇವೇಗೌಡರ ಪರ ಜಯಘೋಷ ಮೊಳಗಿಸಿ, ಸಿಹಿ ಹಂಚಿ ಸಂಭ್ರಮಿಸಲಾಯಿತು.

ನಂತರ ಆಜಾದ್ ರಸ್ತೆಯಲ್ಲಿರುವ ಹಜರತ್ ಗುಜರಾತಿ ಬಾದ್ ಷಾ ದರ್ಗಾದಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ದೇವಸ್ಥಾನಗಳಲ್ಲಿ ಪೂಜೆ, ಆಸ್ಪತ್ರೆ ರೋಗಿಗಳಿಗೆ ಹಣ್ಣು–ಹಂಪಲು ವಿತರಣೆ ಸೇರಿ ವಿವಿಧ ಕಾರ್ಯಕ್ರಮಗಳು ಜರುಗಿದವು. ಹಾಸನದಲ್ಲಿ ಶಾಸಕ ಹೆಚ್.ಪಿ.ಸ್ವರೂಪ್



ನೇತೃತ್ವದಲ್ಲಿ ಅದ್ದೂರಿ ಆಚರಣೆ ಹಮ್ಮಿಕೊಳ್ಳಲಾಗಿತ್ತು.

ಶಾಸಕ ಹೆಚ್.ಪಿ.ಸ್ವರೂಪ್, ಮಾಜಿ ಸಚಿವ ಹೆಚ್.ಕೆ. ಕುಮಾರಸ್ವಾಮಿ, ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್. ಲಿಂಗೇಶ್ ಸೇರಿ ಪಕ್ಷದ ಮುಖಂಡರು, ಕಾರ್ಯಕರ್ತರು ಬೃಹತ್ ಕ್ರೇನ್ ಸಹಾಯದಿಂದ ಕ್ಷೀರಾಭಿಷೇಕ, ಪುಷ್ಪಾಭಿಷೇಕ ನೆರವೇರಿಸಿದರು.

ಈ ವೇಳೆ ದೇವೇಗೌಡರಿಗೆ ಜಯವಾಗಲಿ, ರೈತರ ನಾಯಕ ದೇವೇಗೌಡ ಎಂಬ ಜಯಘೋಷ ಮೊಳಗಿದವು. ಪುಷ್ಪಾರ್ಚನೆ, ಸಿಹಿ ವಿತರಣೆ ಹಾಗೂ ಪಟಾಕಿ ಸಿಡಿಸುವ ಮೂಲಕ ಹುಟ್ಟುಹಬ್ಬ ಆಚರಿಸಲಾಯಿತು. ನಂತರ ನಗರದ ಗವೇನಹಳ್ಳಿಯ ಕಾಮಧೇನು ಸಹಕಾರಿ ವಿದ್ಯಾಶ್ರಮದಲ್ಲಿ ಕೇಕ್ ಕತ್ತರಿಸಿ ಹಿರಿಯರಿಗೆ ಹಣ್ಣು ಹಂಪಲು ವಿತರಣೆ ಮಾಡಲಾಯಿತು.

ಶಾಸಕ ಹೆಚ್.ಪಿ.ಸ್ವರೂಪ್ ಸುದ್ದಿಗಾರರೊಂದಿಗೆ ಮಾತನಾಡಿ, ಹೊಳೆನರಸೀಪುರ ತಾಲ್ಲೂಕಿನ ಹರದನಹಳ್ಳಿ ಎಂಬ ಸಣ್ಣ ಊರಿನ ರೈತ ಕುಟುಂಬದಲ್ಲಿ ಜನಿಸಿ ದೇಶದ ಪ್ರಧಾನಿಯಾಗುವುದು ಸುಲಭದ ಮಾತಲ್ಲ. ಹೆಚ್.ಡಿ.ದೇವೇಗೌಡ ಅವರ ಸಾಧನೆಗೆ ಯಾರೂ ಸರಿಸಾಟಿ ಅಲ್ಲವೆಂದರು. ಅವರು ಈ ನಾಡಿಗೆ, ದೇಶಕ್ಕೆ ಬಹಳಷ್ಟು ಕೊಡುಗೆ ನೀಡಿದ್ದಾರೆ. ಎಲ್ಲಾ ವರ್ಗದ ಜನರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಕೆಲಸ ಮಾಡಿದ್ದಾರೆಂದರು.

ಪ್ರಾದೇಶಿಕ ಪಕ್ಷ ಕಟ್ಟಿ, ಸಚಿವರಾಗಿ, ಮುಖ್ಯಮಂತ್ರಿಯಾಗಿ, ಪ್ರಧಾನಿಯಾಗಿ ಅವರು ಮಾಡಿರುವ ದೇಶ ಸೇವೆ ಅಪಾರವಾಗಿದೆ, ಅವರಿಗೆ ದೇವರು ಇನ್ನಷ್ಟು ಆಯಸ್ಸು ಆರೋಗ್ಯ ಕೊಟ್ಟು ಜನಸೇವೆ ಮಾಡುವ ಅವಕಾಶ ಕಲ್ಪಿಸಲಿ ಎಂದು ಪ್ರಾರ್ಥಿಸಿದರು.

ಮಾಜಿ ಸಚಿವ ಹೆಚ್.ಕೆ.ಕುಮಾರಸ್ವಾಮಿ, ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್.ಲಿಂಗೇಶ್ ಮಾತನಾಡಿದರು.

ಜಿಲ್ಲಾ ಜೆಡಿಎಸ್ ವಕ್ತಾರ ರಘು ಹೊಂಗೆರೆ, ತಾಲ್ಲೂಕು ಅಧ್ಯಕ್ಷ ಎಸ್.ದ್ಯಾವೇಗೌಡ, ಹೆಚ್‌ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸೋಮನಹಳ್ಳಿ ನಾಗರಾಜ್, ಮುಖಂಡರಾದ ಸತ್ಯನಾರಾಯಣ, ಬೂವನಹಳ್ಳಿ ಸ್ವಾಮಿಗೌಡ, ಸಿ.ಆರ್. ಶಂಕರ್ ಹಾಜರಿದ್ದರು.

# ಆಸ್ಪತ್ರೆಗಳಲ್ಲಿ ದರ ಪಟ್ಟಿ ಪ್ರದರ್ಶನಕ್ಕೆ ಡಿಸಿ ಸೂಚನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿರುವ ಖಾಸಗಿ ಆಸ್ಪತ್ರೆಗಳಲ್ಲಿ ಕಡ್ಡಾಯವಾಗಿ ದರ ಪಟ್ಟಿಗಳನ್ನು ಸೂಚನಾ ಫಲಕದಲ್ಲಿ ಅಳವಡಿಸಬೇಕು. ಈ ನಿಟ್ಟಿನಲ್ಲಿ ಪರಿಶೀಲನೆ ಮಾಡಿ ಒಂದು ತಿಂಗಳ ಒಳಗೆ ವರದಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮಾರ ನಡೆದ ಕೆಪಿಎಂಇ (ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆ) ಸಭೆಯಲ್ಲಿ ಮಾತನಾಡಿದ ಅವರು, ಆಸ್ಪತ್ರೆಗೆ ಬರುವ ರೋಗಿಗಳಿಗೆ ಕಾಣುವ ರೀತಿಯಲ್ಲಿ ದರಪಟ್ಟಿಯನ್ನು ಹಾಕಬೇಕು. ಜೊತೆಗೆ ಕನ್ನಡ ಭಾಷೆಯಲ್ಲಿ ಹಾಕಬೇಕು. ಆರೋಗ್ಯ ವಿಮೆ, ಉಚಿತ ಆರೋಗ್ಯ ಸೇವೆ, ರಿಯಾಯಿತಿ ಮತ್ತು ವೈದ್ಯಕೀಯ ಬಿಲ್ ಮರು ಪಾವತಿ ಕುರಿತ ಮಾಹಿತಿ ಕೂಡ ಫಲಕದಲ್ಲಿ ಅಳವಡಿಸಬೇಕು. ಜೊತೆಗೆ ಆರೋಗ್ಯ ಸೇವೆಗಳ ನ್ಯೂನ್ಯತೆಗಳ ಬಗ್ಗೆ ಸಾರ್ವಜನಿಕರು ದೂರು ಸಲ್ಲಿಸಲು ದೂರವಾಣಿ ಸಂಖ್ಯೆ ಅಳವಡಿಸಬೇಕು ಎಂದರು.

# ಚನ್ನರಾಯಪಟ್ಟಣದಲ್ಲಿ ಇಳೆಗೆ ತಂಪೆರೆದ ಮಳೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನಾದ್ಯಂತ ಸೋಮವಾರ ಹದ ಮಳೆ ಸುರಿದಿದೆ. ಬೆಳಿಗ್ಗೆಯಿಂದ ಮೋಡ ಕವಿದ ವಾತಾವರಣ ಸೃಷ್ಟಿಯಾಗಿ ಮಧ್ಯಾಹ್ನ 2 ಗಂಟೆಗೆ ಪ್ರಾರಂಭವಾದ ಮಳೆ ಸಂಜೆ 4ರ ವರೆಗೆ ಸುರಿಯಿತು. ಪೂರ್ವ ಮುಂಗಾರು ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳಿಗೆ ಭಾರೀ ಹಿನ್ನಡೆಯಾಗಿತ್ತು. ಯುಗಾದಿ ಹೊಸ ಸಂವತ್ಸರದ ನಂತರ ಮಳೆ ಪ್ರಾರಂಭಗೊಂಡಿದ್ದರೆ ಮುಂಗಾರು ಹಂಗಾಮಿನ ಬೆಳೆ ಬಿತ್ತನೆ ಮಾಡಲು ಅನುಕೂಲವಾಗುತ್ತಿತ್ತು. ಆದರೆ 2 ತಿಂಗಳು ಸಮೀಪಿಸಿದರೂ ಪ್ರಾರಂಭವಾಗದ ಹಿನೆಲೆ ಯಾವುದೇ ಮುಂಗಾರು ಹಂಗಾಮಿನ ಬೆಳೆಗಳು ಬಿತ್ತನೆ ಕಂಡಿರುವುದಿಲ್ಲ.

ಈಗಷ್ಟೇ ಮಳೆ ಪ್ರಾರಂಭವಾಗಿದ್ದು ಕೃಷಿ ಜಮೀನು ಉಳುಮೆ ಮಾಡಿ ಗೊಬ್ಬರ ಹರಡಿ ಹದಗೊಳಿಸಿಲ್ಲದ ಕಾರಣ ಮುಂಗಾರು ಹಂಗಾಮಿನ ಬೆಳೆಗಳನ್ನು ಬಿತ್ತನೆ ಮಾಡಲು ಹಿನ್ನಡೆಯಾಗಲಿದೆ. ಮಳೆ ಬಿಡುವು ನೀಡಿ ಕೃಷಿ ಜಮೀನುಗಳನ್ನು ಹದಗೊಳಿಸಿ ಬಿತ್ತನೆ ಮಾಡಿದರೂ ಸಹ ತಡವಾಗಿರುವುದರಿಂದ ನಿರೀಕ್ಷೆಯಂತೆ ಫಸಲು ಬರಲು ಸಾಧ್ಯವಿಲ್ಲ. ಸಮಯ ಮೀರಿ ಬಿತ್ತನೆ ಮಾಡಿದರೆ ಉತ್ತಮ ಫಸಲು ಹಾಗು ಇಳುವರಿ ಸಿಗುವುದಿಲ್ಲ ಎಂದು ಮಂಚೇನಹಳ್ಳಿ ರೈತ ನಂಜೇಗೌಡ ತಿಳಿಸಿದರು.

ಮೊದಲೆಲ್ಲ ಬೋರೆ ಪ್ರದೇಶಗಳಲ್ಲಿ ಮುಂಗಾರು ಹಂಗಾಮಿನ ಬೆಳೆ ಬೆಳೆಯಲಾಗುತ್ತಿತ್ತು. ಆದರೆ ಇತ್ತೀಚಿನ



ವರ್ಷಗಳಿಂದ ಕೊಳವೆ ಬಾವಿಗಳನ್ನು ಹೊಂದಿದ್ದು ತೆಂಗು, ಅಡಕೆ, ಶುಂಠಿ ಹಾಗು ಬಾಳೆ ಬೆಳೆಗಳತ್ತ ರೈತರು ಮುಖ ಮಾಡಿರುವ ಪರಿಣಾಮ ಮುಂಗಾರು ಹಂಗಾಮಿನ ಬೆಳೆಗಳಾದ ಅಲಸಂದೆ, ಹೆಸರು, ಉದ್ದು ಹಾಗೂ ಎಳ್ಳು ಸೇರಿ ಕಿರು ಧಾನ್ಯಗಳನ್ನು ಬೆಳೆಯುವ ಜಮೀನು ಮತ್ತು ಪದ್ಧತಿ ಕ್ಷೀಣಿಸುತ್ತಿದೆ ಎಂದು ರೈತ ಸಲಹೆಗಾರ ಕರಿಕ್ಯಾತನಹಳ್ಳಿ ತುಳಸಿ ರಾಜ್ ಕಳವಳ ವ್ಯಕ್ತಪಡಿಸಿದರು.

ಕಳೆದ ಶುಕ್ರವಾರ ರಾತ್ರಿ ಮಳೆ–ಗಾಳಿಯ ಅಬ್ಬರದ ಪರಿಣಾಮ ತಾಲ್ಲೂಕಿನ ಗಡಿಭಾಗದ ಗ್ರಾಮಗಳಲ್ಲಿ 65ಕ್ಕೂ ಹೆಚ್ಚಿನ ತೆಂಗಿನ ಮರಗಳು ಹಾಗೂ 26ಕ್ಕೂ ಹೆಚ್ಚು ವಿದ್ಯುತ್ ಕಂಬ ಧರೆಗುರುಳಿ ನಷ್ಟ ಸಂಭವಿಸಿತ್ತು. ಅಧಿಕಾರಿಗಳು ಭೇಟಿ ನೀಡಿ, ತೆಂಗು ಹಾಗು ಬಾಳೆ ಬೆಳೆಯಿಂದ ನಷ್ಟ ಅನುಭವಿಸಿರುವ ರೈತರಿಗೆ ಪರಿಹಾರ ಕಲ್ಪಿಸುವುದಾಗಿ ಭರವಸೆ ನೀಡಿದ್ದಾರೆಂದು ಉಳ್ಳಾವಳ್ಳಿ ಗ್ರಾಮದ ಹೆಚ್.ಎನ್.ಕುಮಾರ್ ಹೇಳಿದರು.

# ದೇವೇಗೌಡರ ಹುಟ್ಟು ಹಬ್ಬ: ಜೆಡಿಎಸ್‌ನಿಂದ ವಿಶೇಷ ಕಾರ್ಯಕ್ರಮ

ಸಕಲೇಶಪುರ: ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರಿಗೆ ಭಗವಂತ ಮತ್ತಷ್ಟು ಆಯಸ್ಸು, ಆರೋಗ್ಯ ನೀಡಿ ಜನಸೇವೆಯನ್ನು ಮುಂದುವರಿಸುವ ಶಕ್ತಿ ನೀಡಲಿ ಎಂದು ಜೆಡಿಎಸ್ ಮುಖಂಡ ಸಚ್ಚಿನ್ ಪ್ರಸಾದ್ ಹೇಳಿದರು.

ಪಟ್ಟಣದಲ್ಲಿ ತಾಲೂಕು ಜೆಡಿಎಸ್ ವತಿಯಿಂದ ಆಯೋಜಿಸಲಾಗಿದ್ದ ಎಚ್. ಡಿ ದೇವೇಗೌಡ ಅವರ 94ನೇ ವರ್ಷದ ಹುಟ್ಟುಹಬ್ಬದ ಆಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇಶದ ರಾಜಕೀಯ ಇತಿಹಾಸದಲ್ಲಿ ದೇವೇಗೌಡರ ಕೊಡುಗೆ ಅಪಾರವಾಗಿದೆ. ರೈತರ ಪರ ಧ್ವನಿಯಾಗಿ ಸದಾ ಹೋರಾಟ ನಡೆಸಿದ ಅವರು ಪ್ರಧಾನ ಮಂತ್ರಿಯಾಗಿದ್ದ ಅವಧಿಯಲ್ಲಿ ದೇಶದ ಅಭಿವೃದ್ಧಿಗೆ ಹಲವು ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಎಂದು ಸ್ಮರಿಸಿದರು. ಸರಳತೆ, ಪ್ರಾಮಾಣಿಕತೆ ಹಾಗೂ ಜನಪರ ಆಡಳಿತದ ಮೂಲಕ ದೇವೇಗೌಡರು ಜನಮನದಲ್ಲಿ ಮಹತ್ವದ ಸ್ಥಾನ ಪಡೆದಿದ್ದಾರೆ. ಇಂದಿಗೂ ರೈತರು, ಬಡವರು ಮತ್ತು ಗ್ರಾಮೀಣ ಜನರ ಪರ ಕಾಳಜಿ ವಹಿಸುವ ಅಪರೂಪದ ನಾಯಕರಾಗಿ ಗುರುತಿಸಿಕೊಂಡಿದ್ದಾರೆ ಎಂದು ಹೇಳಿದರು.

ಜಿ.ಪಂ. ಮಾಜಿ ಸದಸ್ಯೆ ಚಂಚಲ ಕುಮಾರಸ್ವಾಮಿ ಮಾತನಾಡಿ, ಗ್ರಾಮೀಣ ಭಾಗದ ಜನರ ಸಮಸ್ಯೆಗಳಿಗೆ ಸ್ಪಂದಿಸಿದ ನಾಯಕರಲ್ಲಿ ದೇವೇಗೌಡರು ಪ್ರಮುಖರು. ರೈತರು, ಕಾರ್ಮಿಕರು ಹಾಗೂ ಹಿಂದುಳಿದ ವರ್ಗಗಳ



ಪರವಾಗಿ ಸದಾ ಧ್ವನಿ ಎತ್ತಿದ ಅವರು ರಾಜ್ಯ ಹಾಗೂ ದೇಶದ ರಾಜಕೀಯದಲ್ಲಿ ಮಾದರಿ ನಾಯಕನಾಗಿ ಹೊರಹೊಮ್ಮಿದ್ದಾರೆ ಎಂದು ಹೇಳಿದರು.

ಹುಟ್ಟುಹಬ್ಬದ ಅಂಗವಾಗಿ ಜೆಡಿಎಸ್ ಕಾರ್ಯಕರ್ತರು ಪಟ್ಟಣದ ಸಕಲೇಶ್ವರ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ದೇವೇಗೌಡರವರ ದೀರ್ಘಾಯುಷ್ಯಕ್ಕಾಗಿ ಪ್ರಾರ್ಥಿಸಿದರು. ಬಳಿಕ ಕ್ರಾಫರ್ಡ್ ಆಸ್ಪತ್ರೆಯ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿ ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಿದರು. ನಂತರ ಸಾರ್ವಜನಿಕರಿಗೂ ಸಿಹಿ ವಿತರಿಸಲಾಯಿತು.

ಜೆಡಿಎಸ್ ಮುಖಂಡರಾದ ಉಜ್ಮಾ ರುಜ್ವಿ, ಸುದರ್ಶನ್, ಭಾಸ್ಕರ್ ಕೌಡಳ್ಳಿ, ಜಾತಹಳ್ಳಿ ಪುಟ್ಟಸ್ವಾಮಿ, ಅಸ್ಲಾಂ, ಪ್ರಜ್ವಲ್, ವಡೂರು ಗಿರಿ, ಚೈತ್ರ, ಕೌಶಿಕ್, ಪುರಸಭೆ ಮಾಜಿ ಅಧ್ಯಕ್ಷ ಮಲ್ನಾಡ್ ಜಾಕೀರ್, ಯಾದ್ ಗಾರ್ ಇಬ್ರಾಹಿಂ, ಜ್ಯೋತಿ ರಾಜಕುಮಾರ್ ಮತ್ತಿತರರಿದ್ದರು.

# ಮಳೆರಾಯನ ಮುನಿಸು: ಆಲೂಗೆಡ್ಡೆ ಬಿತ್ತನೆಗೆ ಹಿನ್ನಡೆ

## ಭೂಮಿ ಹದಗೊಳಿಸದೆ ಸುಮ್ಮನಾದ ರೈತರು | ಆಕಾಶದತ್ತ ಎಲ್ಲರ ಚಿತ್ತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಗಳಲ್ಲಿ ಒಂದಾಗಿರುವ ಆಲೂಗೆಡ್ಡೆ ಬಿತ್ತನೆಗೆ ರೈತರು ತಯಾರಾಗಿದ್ದಾರೆಯಾದರೂ ವರುಣನ ಆಗಮನಕ್ಕಾಗಿ ಚಾತಕ ಪಕ್ಷಿಯಂತೆ ಕಾಯುತ್ತಿದ್ದಾರೆ.

ಬೆಳೆಗಾರರಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಜಿಲ್ಲಾಡಳಿತ ಬಿತ್ತನೆ ಆಲೂಗೆಡ್ಡೆ ಮಾರಾಟ ಪ್ರಾರಂಭಿಸಿದೆ. ಆದರೆ, ಹದ ಮಳೆಯೂ ಸುರಿಯದ ಕಾರಣ ಸಮಸ್ಯೆಯಾಗಿದೆ. ಸ್ವಲ್ಪ ಮಳೆಯಾದರೂ ಭೂಮಿ ಸಿದ್ಧಪಡಿಸಿಕೊಳ್ಳಬಹುದು. ಹೀಗಾಗಿ ರೈತರು ಆಕಾಶದತ್ತ ಮುಖ ಮಾಡುವಂತಾಗಿದೆ. ಬಿಸಿಲ ಧಗೆಗೆ ಭೂಮಿ ಕಾದ ಕೆಂಡವಾಗಿದ್ದು, ಮಳೆಯಾಗದಿದ್ದರೆ ಭವಿಷ್ಯದ ಚಿಂತೆ ಕಾಡುತ್ತಿದೆ.

ತಾಲ್ಲೂಕಿನ ಚಿಕ್ಕಕೊಂಡಗೊಳ, ದೊಡ್ಡಕೊಂಡಗೊಳ, ನಿಟ್ಟೂರು, ಸಾಲಗಾಮೆ, ಹಳೇಬೀಡು, ಗೊರೂರು ಸೇರಿ ಹೊಳೆನರಸೀಪುರ, ಅರಕಲಗೂಡು ಭಾಗದಲ್ಲಿ ಆಲೂಗೆಡ್ಡೆ ಹೆಚ್ಚಾಗಿ ಬೆಳೆಯಲಾಗುತ್ತದೆ. ಈ ವಾರದಲ್ಲಿ ಮಳೆ ಸುರಿಯದೆ ಇದ್ದರೆ ಬಿತ್ತನೆ ಕಾರ್ಯಕ್ಕೆ ಭಾರೀ ಹಿನ್ನಡೆಯಾಗುವುದು ಮಾತ್ರವಲ್ಲದೆ ಫಸಲಿನ ಮೇಲೆ ಪರಿಣಾಮ ಬೀರಲಿದೆ. ನಂತರ ಜೋಳ ಬೆಳೆ ಕೈಗೊಳ್ಳಲು ಸಮಸ್ಯೆಯಾಗುವ ಆತಂಕ ಅನ್ನದಾತರನ್ನು ಕಾಡುತ್ತಿದೆ.

### 15 ಸಾವಿರ ಹೆಕ್ಟೇರ್ ಗುರಿ

ಆಲೂಗೆಡ್ಡೆ ಬೆಳೆಗೂ ಹಾಸನ ಜಿಲ್ಲೆಗೂ ಅವಿನಾಭಾವ ಸಂಬಂಧವಿದೆ. ದಶಕಗಳ ಹಿಂದೆ 30 ಸಾವಿರ ಹೆಕ್ಟೇರ್ ವರೆಗೆ ಬಿತ್ತನೆ ಮಾಡಲಾಗುತ್ತಿತ್ತು. ಆದರೆ ಅಂಗಮಾರಿ



ರೋಗ, ಹವಾಮಾನ ಬದಲಾವಣೆ, ಬೆಲೆ ಕುಸಿತ ಹೀಗೆ ನಾನಾ ಕಾರಣಗಳಿಂದ ಬಿತ್ತನೆ ಪ್ರದೇಶ ಇಳಿಕೆಯಾಗುತ್ತಲೇ ಬಂದಿದೆ. ಕಳೆದ ವರ್ಷ ಕೇವಲ 4 ಸಾವಿರ ಹೆಕ್ಟೇರ್‌ನಲ್ಲಿ ಬಿತ್ತನೆ ಕೈಗೊಳ್ಳಲಾಗಿದೆ.

ಶತಾಯಗತಾಯ ಈ ಬಾರಿ 15 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಆಗಲೇಬೇಕೆಂದು ಪಣ ತೊಟ್ಟಿದ್ದ ತೋಟಗಾರಿಕೆ ಇಲಾಖೆ ಕಳೆದ ಆರು ತಿಂಗಳಿಂದ ವಿವಿಧ ಕಾರ್ಯಕ್ರಮ ಹಮ್ಮಿಕೊಂಡಿದೆ. ಇದೇ ಪ್ರಥಮ ಬಾರಿಗೆ ರಾಜ್ಯ ಮಟ್ಟದ ಆಲೂಗೆಡ್ಡೆ ಮೇಳ, ರೈತರಿಗೆ ಅರಿವು ಕಾರ್ಯಾಗಾರ, ತೋಟಗಾರಿಕೆ ವಿಜ್ಞಾನಿಗಳಿಂದ ತರಬೇತಿ, ಬೀಜೋತ್ಪಾದನೆ ಸೇರಿ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಬಿತ್ತನೆ ಆಲೂಗೆಡ್ಡೆ ವಿತರಣೆಯಲ್ಲಿ ರೈತರಿಗೆ ಅನ್ಯಾಯವಾಗದಂತೆ ಎಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಪಂಜಾಬ್‌ನಿಂದ ತರಿಸಿಕೊಳ್ಳುವ ಆಲೂಗೆಡ್ಡೆಯನ್ನು ಸಂಸ್ಕರಿಸುವ ನಿಟ್ಟಿನಲ್ಲಿ ವೈಜ್ಞಾನಿಕ ವಿಧಾನಗಳನ್ನು ಅನುಸರಿಸಲಾಗಿದೆ. ಬಿತ್ತನೆ ಕಾರ್ಯ ಸುಗಮವಾಗಿಸುವ ನಿಟ್ಟಿನಲ್ಲಿ ಎಲ್ಲಾ ಪ್ರಯತ್ನ ನಡೆಸಲಾಗಿದೆಯಾದರೂ ವರುಣನ ಮುನಿಸು ಎಲ್ಲಾ ಲೆಕ್ಕಾಚಾರಗಳನ್ನು ತಲೆ ಕೆಳಗಾಗಿಸಿದೆ.

ಇಷ್ಟೊತ್ತಿಗೆ ನಾಲ್ಕೈದು ಮಳೆಯಾಗಿದ್ದರೆ ಅನುಕೂಲವಾಗುತ್ತಿತ್ತು.

ಬಿತ್ತನೆ ಆಲೂಗೆಡ್ಡೆ ಮೊಳಕೆಯೊಡೆಲು ಸಾಧ್ಯವಾಗುತ್ತಿಲ್ಲ. ಕೊಳವೆ ಬಾವಿ ಸೌಲಭ್ಯವಿರುವ ರೈತರು ಬಿತ್ತನೆ ಪ್ರಾರಂಭಿಸಿದ್ದಾರೆ. ಮಳೆಯಾದರೆ ಅನುಕೂಲವಾಗುತ್ತದೆ ಎಂದು ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಯೋಗೇಶ್ ಹೇಳಿದರು.


> ಆಲೂಗೆಡ್ಡೆ ಬಿತ್ತನೆಗೆ ರೈತರು ತಯಾರಾಗಿದ್ದಾರೆ. ಹಾಸನದ ಎಪಿಎಂಸಿಯಲ್ಲಿ ಬಿತ್ತನೆ ಆಲೂಗೆಡ್ಡೆ ಮಾರಾಟ ಮಾಡುತ್ತಿದ್ದು, ರೈತರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ. ನಮ್ಮ ನಿರೀಕ್ಷೆಯಂತೆ ಇಷ್ಟೊತ್ತಿಗೆ ನಾಲ್ಕೈದು ಮಳೆ ಬೀಳಬೇಕಿತ್ತು. ಈ ವಾರದಲ್ಲಿ ವರುಣ ಕೃಪೆ ತೋರುವ ಸಾಧ್ಯತೆಯಿದ್ದು ಕಾದು ನೋಡಬೇಕಿದೆ.
>
> **- ಯೋಗೇಶ್,**
> **ತೋಟಗಾರಿಕೆ ಇಲಾಖೆ ಉಪನಿರ್ದೇಶಕ**

### ಶೇ. 90 ರಷ್ಟು ಬಿತ್ತನೆ ಕಾರ್ಯ ಕುಂಠಿತ

ಜಿಲ್ಲೆಯಲ್ಲಿ ಪೂರ್ವ ಮುಂಗಾರು ಮಳೆಯ ಕೊರತೆಯಿಂದ ಶೇ. 90ರಷ್ಟು ಬಿತ್ತನೆ ಕಾರ್ಯ ಕುಂಠಿತಗೊಂಡಿದೆ. ಮತ್ತೊಂದೆಡೆ ಮುಂಗಾರು ಹಂಗಾಮಿಗೆ 55,696 ಟನ್ ರಸಗೊಬ್ಬರ ದಾಸ್ತಾನು ಲಭ್ಯವಿದ್ದು ಕೊರತೆಯಾಗದಂತೆ ಜಿಲ್ಲಾಡಳಿತ ಕ್ರಮ ಕೈಗೊಂಡಿದೆ.

ಜನವರಿ 1 ರಿಂದ ಇಲ್ಲಿವರೆಗೆ ಜಿಲ್ಲೆಯಲ್ಲಿ ವಾಡಿಕೆ ಮಳೆ 10.3 ಸೆಂ.ಮೀ. ಇದ್ದರೆ 7.6 ಸೆಂ.ಮೀ. ಸುರಿದಿದೆ. ಜಿಲ್ಲಾದ್ಯಂತ ಶೇ. 30ರಷ್ಟು ಮಳೆ ಕೊರತೆಯಾಗಿದೆ. ಸುಮಾರು 5,500 ಹೆಕ್ಟೇರ್‌ಗೂ ಹೆಚ್ಚು ಪ್ರದೇಶದಲ್ಲಿ ಹೆಸರು, ಉದ್ದು, ಅಲಸಂದೆ ಸೇರಿದಂತೆ ಇತರ ದ್ವಿದಳ ಧಾನ್ಯಗಳನ್ನು ಬಿತ್ತನೆ ಮಾಡಲಾಗುತ್ತದೆ. ಆದರೆ ಮಳೆ ಕೊರತೆ ಕಾರಣ ಸುಮಾರು 4 ಸಾವಿರ ಹೆಕ್ಟೇರ್‌ಗೂ ಹೆಚ್ಚು ಪ್ರದೇಶದಲ್ಲಿ ಬಿತ್ತನೆಯಾಗಿಲ್ಲ. ಬಿತ್ತನೆ ಪೂರ್ವ ಕೃಷಿ ಚಟುವಟಿಕೆಗೆ ಹಿನ್ನಡೆಯುಂಟಾಗಿದೆ.

# ಆಕಸ್ಮಿಕ ಬೆಂಕಿಗೆ ಸುಟ್ಟು ಕರಕಲಾದ ಬಟ್ಟೆ ಅಂಗಡಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಆಕಸ್ಮಿಕ ಬೆಂಕಿ ತಗುಲಿ ಬಟ್ಟೆ ಅಂಗಡಿ ಸಂಪೂರ್ಣ ಸುಟ್ಟು ಕರಕಲಾಗಿರುವ ಘಟನೆ ಪಟ್ಟಣದ ಹೊಳೆ ಬೀದಿಯಲ್ಲಿ ನಡೆದಿದೆ.

ಸಂತೋಷ್ ಎಂಬುವವರಿಗೆ ಸೇರಿದ ಬಟ್ಟೆ ಅಂಗಡಿಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಮಾಲೀಕ ಸಂತೋಷ್ ಅವರು ಮನೆಗೆ ಹಾಲು ತರಲೆಂದು ರಾತ್ರಿ ಅಂಗಡಿಯ ಶೆಲ್ಟರ್ ಎಳೆದು ಹೊರ ಹೋಗಿದ್ದಾಗ ಬೆಂಕಿ ಹೊತ್ತಿಕೊಂಡಿದೆ. ಆದರೆ ಅಂಗಡಿಯೊಳಗಿನಿಂದ ಬೆಂಕಿ ಹಾಗು ಹೊಗೆ ಹೊರ ಬರುತ್ತಿರುವುದನ್ನು ಗಮನಿಸಿದ ಸ್ಥಳೀಯರು ಬೆಂಕಿ ನಂದಿಸಲು ಮುಂದಾಗಿದ್ದಾರೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಸಂತೋಷ್ ಅವರು ಅಗ್ನಿ ಶಾಮಕ ಸಿಬ್ಬಂದಿಗೆ ವಿಷಯ ತಿಳಿಸಿದರು. ಅಷ್ಟರಲ್ಲಿ ಬೆಲೆ ಬಾಳುವ ಬಟ್ಟೆಗಳೆಲ್ಲಾ ಸುಟ್ಟು ಕರಕಲಾಗಿದ್ದವು.

ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಅವಘಡ ಸಂಭವಿಸಿದೆ ಎನ್ನಲಾಗಿದೆ. ಪಟ್ಟಣ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದರು.

# ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಪ್ರವೇಶಾತಿ ಆರಂಭ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಜಾವಗಲ್: ಅರಸೀಕೆರೆ ತಾಲ್ಲೂಕು ಜಾವಗಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2026-27ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ ಪ್ರಕ್ರಿಯೆ ಆರಂಭಗೊಂಡಿದ್ದು, ವಿದ್ಯಾರ್ಥಿಗಳು ಹಾಗೂ ಪೋಷಕರು ಕಾಲೇಜಿನ ಸೌಲಭ್ಯಗಳನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ಪ್ರಾಂಶುಪಾಲ ಹೆಚ್.ಡಿ.ಮೋಹನ್ ಕುಮಾರ್ ಮನವಿ ಮಾಡಿದ್ದಾರೆ.

ಕಾಲೇಜಿನಲ್ಲಿ ಬಿ.ಎ. ವಿಭಾಗದಲ್ಲಿ ಹೆಚ್.ಇ.ಪಿ ಹಾಗೂ ಹೆಚ್.ಇ.ಎಸ್. ಕೋರ್ಸ್ ಮತ್ತು ಬಿಕಾಂ ಕೋರ್ಸ್ ಲಭ್ಯವಿದೆ. ದ್ವಿತೀಯ ಪಿಯುಸಿ ಕಲಾ ಮತ್ತು ವಾಣಿಜ್ಯ ವಿಭಾಗದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು, ಜೆಒಸಿ ಹಾಗೂ ಐಟಿಐ ಪಾಸಾದ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದ್ದಾರೆ.

ಕಾಲೇಜಿನಲ್ಲಿ ನುರಿತ ಬೋಧಕ ವರ್ಗ, ವಿಶಾಲ ತರಗತಿ ಕೊಠಡಿ, ಪ್ರಯೋಗಾಲಯ, ಸುಸಜ್ಜಿತ ಗ್ರಂಥಾಲಯ, ವಾಚನಾಲಯ ಸೇರಿ ಉತ್ತಮ ಸೌಕರ್ಯಗಳು ಲಭ್ಯವಿವೆ. ಸುಮಾರು 15 ರಿಂದ 20 ಸಾವಿರ ಪುಸ್ತಕಗಳ ಸಂಗ್ರಹವಿರುವ ಗ್ರಂಥಾಲಯವೂ ವಿದ್ಯಾರ್ಥಿಗಳ ಅಧ್ಯಯನಕ್ಕೆ ಸಹಕಾರಿಯಾಗಿದೆ. ಜೊತೆಗೆ ಎನ್ ಎಸ್ಎಸ್, ಸ್ಕೌಟ್ಸ್ ಮತ್ತು ಗೈಡ್ಸ್, ರೆಡ್ ಕ್ರಾಸ್ ಘಟಕ, ಕ್ರೀಡೆ ಹಾಗು ಸಾಂಸ್ಕೃತಿಕ ಚಟುವಟಿಕೆಗಳಿಗೆ ಉತ್ತೇಜನ ನೀಡಲಾಗುತ್ತಿದೆ. ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ, ಸ್ಪೋಕನ್ ಇಂಗ್ಲಿಷ್ ತರಗತಿ, ವಿಷಯವಾರು ಉಪನ್ಯಾಸ ಕಾರ್ಯಾಗಾರಗಳು ಹಾಗು ವಿವಿಧ ವಿದ್ಯಾರ್ಥಿ ವೇತನ ಸೌಲಭ್ಯಗಳೂ ಲಭ್ಯವಿವೆ.

ಕನ್ನಡ ಹಾಗೂ ಇಂಗ್ಲಿಷ್ ಮಾಧ್ಯಮದಲ್ಲಿ ಬೋಧನೆ ನಡೆಯುತ್ತಿದ್ದು, ವಿದ್ಯಾರ್ಥಿಗಳಿಗೆ ಸರ್ಕಾರದ ಪ್ರೋತ್ಸಾಹ ಧನ, ಉದ್ಯೋಗ ಮಾಹಿತಿ, ಪ್ಲೇಸ್ಮೆಂಟ್ ಸೆಲ್ ಮತ್ತು ಹಾಸ್ಟೆಲ್ ಸೌಲಭ್ಯ ಕಲ್ಪಿಸಲಾಗಿದೆ.

ಕಳೆದ 10ರಿಂದ 15 ವರ್ಷಗಳಿಂದ ಕಾಲೇಜು ಶೇ.100 ಫಲಿತಾಂಶ ದಾಖಲಿಸುತ್ತಿದ್ದು, ಹಾಸನ ವಿಶ್ವವಿದ್ಯಾಲಯಕ್ಕೆ ಒಳಪಟ್ಟಿರುವ ಈ ಕಾಲೇಜು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ತನ್ನದೇ ಆದ ವೈಶಿಷ್ಟ್ಯ ಹೊಂದಿದೆ. ವಿದ್ಯಾರ್ಥಿಗಳು ತಡಮಾಡದೆ ಕಾಲೇಜಿಗೆ ದಾಖಲಾಗಿ ಉತ್ತಮ ಶಿಕ್ಷಣ ಪಡೆದು ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗುವ ಅವಕಾಶ ಸದುಪಯೋಗಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

# 9 ಅಡಿ ಎತ್ತರದ ಶನೇಶ್ವರ ಸ್ವಾಮಿ ವಿಗ್ರಹ ಲೋಕಾರ್ಪಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ತಾಲ್ಲೂಕಿನ ತೊಳಲು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆಲೂರು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ 9 ಅಡಿ ಎತ್ತರದ ಏಕಶಿಲಾ ಶ್ರೀ ಕಲ್ಮಂಡಿ ಶನೇಶ್ವರ ಸ್ವಾಮಿಯ ವಿಗ್ರಹ ಲೋಕಾರ್ಪಣೆ ನೆರವೇರಿತು.

ಕಣಿವೆ ದಾಸರಹಳ್ಳಿ ಕ್ಷೇತ್ರದ ಶರಣ್ಯ ಶ್ರೀ ಶಿವಾಚಾರ್ಯ ಸ್ವಾಮೀಜಿ ಧಾರ್ಮಿಕ ಕೈಂಕರ್ಯಗಳ ನೇತೃತ್ವ ವಹಿಸಿದ್ದರು. ಶ್ರೀ ಕಲ್ಮಂಡಿ ಶನೇಶ್ವರ ಸ್ವಾಮಿ, ಆಲೂರು ದುರ್ಗಮ್ಮ ದೇವಿ ಹಾಗೂ ಸರಪಳಿ ಕೆಂಚರಾಯ ಸ್ವಾಮಿ ದೇವಸ್ಥಾನ ಟ್ರಸ್ಟ್ ವತಿಯಿಂದ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮೇ 7ರಂದು ಗಣಹೋಮ, ನವಗ್ರಹ ಹೋಮ, ಚಂಡಿಕಾ ಹೋಮ, ದುರ್ಗಾ ಹೋಮ ಸೇರಿ ವಿವಿಧ ಪೂಜಾ ವಿಧಿವಿಧಾನಗಳು ನೆರವೇರಿದವು. ಬಳಿಕ ಭಕ್ತರಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

ಮೇ 8ರಂದು ಬೆಳಿಗ್ಗೆ ಗಂಗೆ ತರುವ ಕಾರ್ಯಕ್ರಮ, ಪಂಚಾಮೃತ ಅಭಿಷೇಕ, ರುದ್ರಾಭಿಷೇಕ, ಪೂರ್ಣಾಹುತಿ, ಆಲಯ ಪ್ರವೇಶ ಹಾಗೂ ಕಳಸ ಪ್ರತಿಷ್ಠಾಪನೆ ನಡೆಯಿತು. 9 ಅಡಿ ಎತ್ತರದ ಏಕಶಿಲಾ ಶನೇಶ್ವರ ಸ್ವಾಮಿಯ ವಿಗ್ರಹವನ್ನು ಭಕ್ತರ ಸಮ್ಮುಖದಲ್ಲಿ ಲೋಕಾರ್ಪಣೆ ಮಾಡಲಾಯಿತು.

ಶಾಸಕ ಹುಲ್ಲಳ್ಳಿ ಸುರೇಶ್, ಜನಸ್ನೇಹಿ ಟ್ರಸ್ಟ್ ಸಂಸ್ಥಾಪಕ ಯೋಗೇಶ್, ಜನಧ್ವನಿ ಸೇವಾ ಟ್ರಸ್ಟ್ ಸಂಸ್ಥಾಪಕ ಮಹೇಶ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು. ಕಣಿವೆ ದಾಸರಹಳ್ಳಿ ಕ್ಷೇತ್ರದ ಶ್ರೀ ಮಹಿಮ ಶರಣ್ಯ ದೇವರ ಆಗಮನ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿತ್ತು.

ಕೆಂಡದ ಗುಂಡಿಗೆ ಅಗ್ನಿ ಪ್ರತಿಷ್ಠೆ, ಗಂಗಾಸ್ನಾನ ಹಾಗು ಕೆಂಡೋತ್ಸವ ವಿಧಿವಿಧಾನಗಳು ನೆರವೇರಿದವು.



ನಂತರ ಸುಳ್ಳಕ್ಕಿ ಹಾಗೂ ಮೈಲಹಳ್ಳಿ ಗ್ರಾಮಗಳಲ್ಲಿ ಅಡ್ಡೆಗಳ ಮೆರವಣಿಗೆ ನಡೆಯಿತು.

ಸಂಜೆ ಆಲೂರು ಗ್ರಾಮದ ಶ್ರೀ ಅಮೃತೇಶ್ವರ ಸ್ವಾಮಿ ದೇವಾಲಯದಿಂದ ಶನೇಶ್ವರ ಸ್ವಾಮಿ ದೇವಾಲಯದವರೆಗೆ ವೀರಗಾಸೆ ಸಮೇತ ಭವ್ಯ ಮೆರವಣಿಗೆ ನಡೆಯಿತು. ಗ್ರಾಮದ ರಾಜಬೀದಿಯಲ್ಲಿ ಉತ್ಸವ ವೈಭವದಿಂದ ಜರುಗಿತು.

ಕಾರ್ಯಕ್ರಮದ ಅವಧಿಯಲ್ಲಿ ಸಾವಿರಾರು ಭಕ್ತರಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದರು.

### ನುಗ್ಗೇಹಳ್ಳಿಯಲ್ಲಿ ಶನೇಶ್ವರ ಜಯಂತಿ

ನುಗ್ಗೇಹಳ್ಳಿ: ಗ್ರಾಮದ ಶ್ರೀ ಕಲ್ಯಾಣಿ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಶನೇಶ್ವರ ಸ್ವಾಮಿ ಜಯಂತೋತ್ಸವ ಹಾಗೂ ವಿಶೇಷ ಪೂಜೆ, ಹೋಮ-ಹವನಗಳು ಭಕ್ತಿಭಾವದಿಂದ ನೆರವೇರಿದವು

ಅಭಿಷೇಕ, ಹೂವಿನ ಅಲಂಕಾರ ಹಾಗೂ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆದವು. ಚಕ್ರನಾರಾಯಣ ಸ್ವಾಮಿ ಭಜನಾ ತಂಡದ ವತಿಯಿಂದ ಶನಿ ದೇವರ ಕಥಾ ವಚನ ಕಾರ್ಯಕ್ರಮ ಜರುಗಿತು.

ಜಯಂತೋತ್ಸವ ಅಂಗವಾಗಿ ಭಕ್ತರು ಬೆಳಿಗ್ಗೆಯಿಂದಲೇ



ಉಪವಾಸವಿದ್ದು, ಶ್ರದ್ಧಾ-ಭಕ್ತಿಯಿಂದ ಶನಿ ದೇವರ ಆರಾಧನೆ ಮಾಡಿದರು. ವಿಶೇಷ ಪೂಜೆಯಲ್ಲಿ ಭಾಗವಹಿಸಿದ ಭಕ್ತರು ಶನಿ ದೇವರ ಕೃಪೆಗೆ ಪಾತ್ರರಾದರು.

ಪೂಜೆ ಅಂಗವಾಗಿ ಭಕ್ತರಿಗೆ ಪ್ರಸಾದ ವಿನಿಯೋಗ ಹಾಗೂ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದು ಧನ್ಯರಾದರು. ಹೋಬಳಿಯ ಜಂಬೂರು ಗ್ರಾಮದ ಪುರಾಣ ಪ್ರಸಿದ್ಧ ಶನಿದೇವರ ದೇವಾಲಯದಲ್ಲಿಯೂ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳು ಭಕ್ತಿಭಾವದಿಂದ ನೆರವೇರಿದವು.

# ಕದ್ದ ಬೈಕ್‌ಗೆ ಬೆಂಕಿ ಹಚ್ಚಿ ಕಿಡಿಗೇಡಿಗಳು ಪರಾರಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ರಾತ್ರಿ ಹೊತ್ತಲ್ಲಿ ಮನೆ ಮುಂದೆ ನಿಲ್ಲಿಸಿದ್ದ ಬೈಕ್ ಕದ್ದ ಕಳ್ಳರು ಅದು ತಕ್ಷಣ ಆನ್ ಆಗಲಿಲ್ಲವೆಂದು ನಡು ರಸ್ತೆಯಲ್ಲೇ ಬೆಂಕಿ ಹಚ್ಚಿ ಕದ್ದಿದ್ದ ಮತ್ತೊಂದು ಬೈಕ್ ಅನ್ನು ಅಲ್ಲೇ ಬಿಟ್ಟು ತೆರಳಿರುವ ಘಟನೆ ಪಟ್ಟಣದ ನರಸೇಗೌಡ ವಠಾರದಲ್ಲಿ ನಡೆದಿದೆ.

ಮನೆ ಮುಂದೆ ನಿಲ್ಲಿಸಿದ್ದ ಎರಡು ಬೈಕ್‌ಗಳನ್ನು ಕಳ್ಳತನ ಮಾಡಿರುವ ಕಳ್ಳರು ಅವಸರದಲ್ಲಿ ಅಲ್ಲಿಂದ ಪರಾರಿಯಾಗಿ ಯತ್ನಿಸಿದ್ದಾರೆ. ಅದರಲ್ಲಿ ಒಂದು ಬೈಕ್ ಆನ್ ಆಗದ ಹಿನ್ನಲೆಯಲ್ಲಿ ಬೆಂಕಿ ಹಚ್ಚಿ ಪರಾರಿಯಾಗಿದ್ದಾರೆ. ಸಾರ್ವಜನಿಕರಲ್ಲಿ ಈ ಘಟನೆ ಆತಂಕ ಮೂಡಿಸಿದೆ.

ಇತ್ತೀಚಿನ ದಿನಗಳಲ್ಲಿ ಪಟ್ಟಣದಲ್ಲಿ ಬೈಕ್ ಕಳ್ಳತನ ಪ್ರಕರಣ ಹೆಚ್ಚುತ್ತಿವೆ. ರಾತ್ರಿ ವೇಳೆ ಪೊಲೀಸ್ ಗಸ್ತು ನಡೆಸಿದರೂ ಕಳ್ಳರಿಗೆ ಭಯ ಇಲ್ಲದಂತಾಗಿದೆ. ಸರ್ಕಾರಿ ಆಸ್ಪತ್ರೆ, ಸರ್ಕಾರಿ ಕಚೇರಿಗಳ ಎದುರು ನಿಲ್ಲಿಸುವ ಬೈಕ್‌ಗಳು ನಾಪತ್ತೆಯಾಗುತ್ತಿರುವುದು ಸಾಮಾನ್ಯ ಎಂಬಂತಾಗಿದೆ. ಆದರೆ ಮನೆ ಮುಂದೆ ನಿಲ್ಲಿಸಿದ್ದ ಬೈಕ್‌ಗೆ ಬೆಂಕಿ ಹಚ್ಚಿರುವುದು ಆತಂಕ ಹುಟ್ಟಿಸಿದೆ.

ಯುರೋ ಕಿಡ್ ಶಾಲೆ ಸಮೀಪದ ಚಂದ್ರಶೇಖರ್ ಎಂಬುವವರಿಗೆ ಸೇರಿದ ಬೈಕ್‌ಗೆ ಬೆಂಕಿ ಹಚ್ಚಲಾಗಿದೆ. ಶನಿವಾರ ರಾತ್ರಿ 11.30ರ ವೇಳೆ ಘಟನೆ ನಡೆದಿದೆ ಎನ್ನಲಾಗಿದೆ. ಸ್ವಲ್ಪ ದೂರ ಎರಡೂ ಬೈಕ್‌ಗಳನ್ನು ತಳ್ಳಿಕೊಂಡು ಹೋಗಿ ಒಂದು ಬೈಕ್ ಸ್ಟಾರ್ಟ್ ಮಾಡಲು ಮುಂದಾಗಿದ್ದಾರೆ. ಆದರೆ ಆ ಬೈಕ್ ಸ್ಟಾರ್ಟ್ ಆಗದ ಕಾರಣ ಬೆಂಕಿ ಹಚ್ಚಿ ಸುಟ್ಟು ಹಾಕಿದ್ದಲ್ಲದೆ, ಮತ್ತೊಂದು ಬೈಕ್ ಅನ್ನು ಬಿಟ್ಟು ಪರಾರಿಯಾಗಿದ್ದಾರೆ. ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಸುತ್ತಲಿನ ಸಿಸಿಟಿವಿ ಕ್ಯಾಮರಾ ಪರಿಶೀಲಿಸಿ ಕ್ರಮ ಕೈಗೊಂಡಿದ್ದಾರೆ.

ಬೈಕ್ ಮಾಲೀಕ ಚಂದ್ರಶೇಖರ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಪಟ್ಟಣದಲ್ಲಿ ಬೈಕ್ ಕಳ್ಳತನ ಪ್ರಕರಣಗಳು ಹೆಚ್ಚಾಗುತ್ತಿವೆ. ರಾತ್ರಿ ಮನೆ ಮುಂದೆ ಬೈಕ್ ಸೇರಿ ಯಾವ ವಾಹನ ನಿಲ್ಲಿಸುವುದಕ್ಕೆ ಭಯವಾಗುತ್ತಿದೆ. ರಾತ್ರಿ ವೇಳೆ ಪೊಲೀಸರು ಹೆಚ್ಚು ಗಸ್ತು ತಿರುಗಬೇಕೆಂದು ಆಗ್ರಹಿಸಿದರು.

# ಪ್ರತಿಮೆಗಳಿಗೆ ಹಾಕಿದ್ದ ಒಣಗಿದ ಹಾರ ತೆರವು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪಟ್ಟಣದ ವಿವಿಧ ವೃತ್ತಗಳಲ್ಲಿರುವ ಪ್ರತಿಮೆಗಳಿಗೆ ಹಾಕಿದ್ದ ಹೂವಿನ ಹಾರಗಳನ್ನು ಪುರಸಭೆ ಮಾಜಿ ಅಧ್ಯಕ್ಷ ಎ.ಆರ್.ಅಶೋಕ್ ಹಾಗು ಸ್ನೇಹಿತರು ತೆರವುಗೊಳಿಸುವ ಮೂಲಕ ಸ್ವಚ್ಛತೆಯ ಸಂದೇಶ ಸಾರಿದರು.

ಮಹನೀಯರ ಸ್ಮರಣಾರ್ಥ ವಿವಿಧ ವೃತ್ತಗಳಲ್ಲಿ ಪ್ರತಿಮೆ ನಿರ್ಮಿಸಲಾಗಿದೆ. ಜಯಂತಿ ಸಂದರ್ಭದಲ್ಲಿ ತಾಲ್ಲೂಕು ಆಡಳಿತ ಹಾಗು ಸಂಘ ಸಂಸ್ಥೆಗಳಿಂದ ನಡೆಯುವ ಕಾರ್ಯಕ್ರಮದಲ್ಲಿ ಹೂವಿನ ಹಾರ ಹಾಕಲಾಗುತ್ತದೆ. ಆದರೆ ದಿನಗಳು ಕಳೆದಂತೆ ಅವು ಒಣಗಿ ಸೌಂದರ್ಯವನ್ನು ಹದಗೆಡಿಸುತ್ತವೆ. ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ ಅಶೋಕ್ ಅವರು ಸ್ವಚ್ಛತೆಗೆ ಮುಂದಾದರು.

ಈ ವೇಳೆ ಮಾತನಾಡಿದ ಅವರು, ಮಹಾನ್ ನಾಯಕರ ಪ್ರತಿಮೆಗಳಿಗೆ ಗೌರವ ಕೊಡುವುದಾದರೆ ಹೂವಿನ ಹಾರ ಹಾಕಿದ ನಂತರ ಅದರ ಸ್ವಚ್ಛತೆಯನ್ನೂ ಕಾಪಾಡಬೇಕು. ಹೂವಿನ ಹಾರ ಹಾಕಬೇಕಾದರೆ ಇದ್ದಂತಹ ಗೌರವ ಅದೇ ಹಾರ ಒಣಗಿದ ಮೇಲೂ ಇರಬೇಕು. ಸಾಮಾಜಿಕ ಜಾಲತಾಣಗಳ ಮೂಲಕ ಕೆಲವರು ಗಮನ ಸೆಳೆದ ಹಿನ್ನೆಲೆಯಲ್ಲಿ ಸ್ವಚ್ಛತಾ ಕೆಲಸ ಕೈಗೊಂಡಿದ್ದೇವೆ ಎಂದರು.

ಪ್ರತಿಮೆಗೆ ಹಾರ ಹಾಕುವವರು ಸ್ವತ: ಒಣಗಿದ ನಂತರ ತೆರವು ಮಾಡುವ ಜವಾಬ್ದಾರಿಯನ್ನೂ ವಹಿಸಿಕೊಂಡಾಗ ಕಾರ್ಯಕ್ರಮಕ್ಕೆ ಅರ್ಥ ಬರುತ್ತದೆ. ಇಲ್ಲವಾದರೆ ಹಾರ ಹಾಕುವುದೇ ಬೇಡವೆಂದರು.

ಪತ್ರಕರ್ತರ ಸಂಘದ ಖಜಾಂಚಿ ಲೋಹಿತ್, ಮುಖಂಡರಾದ ಬಿ.ಸಿ.ಉಮೇಶ್, ಪಾಂಡುರಂಗ ಮತ್ತಿತರರಿದ್ದರು.

# ಪೊಲೀಸರ ಮೇಲೆ ಕಾರು ಹತ್ತಿಸಲು ಯತ್ನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ವಾಹನ ತಪಾಸಣೆಗೆ ನಿಂತಿದ್ದ ಪೊಲೀಸರ ಮೇಲೆ ಕಾರು ಚಲಾಯಿಸಿ ಕೊಲೆಗೆ ಯತ್ನಿಸಿದ ಘಟನೆ ತಾಲ್ಲೂಕಿನ ರಕ್ಷಿದಿ ಸಮೀಪ ಶನಿವಾರ ನಡೆದಿದೆ.

ಬೆಂಗಳೂರಿನ ರಾಚೇನಹಳ್ಳಿ ನಿವಾಸಿ ಕಿರಣ್ ಪೊಲೀಸರ ಮೇಲೆ ವಾಹನ ಹತ್ತಿಸಲು ಯತ್ನಿಸಿದ ವ್ಯಕ್ತಿ.

ಐಎಂವಿ ಪ್ರಕರಣ ದಾಖಲಿಸುವ ಸಂಬಂಧ ಸಿಬ್ಬಂದಿ ಚೇತನ್, ಖಾದರ್ ಅಲಿ, ಧರ್ಮೇಂದ್ರ ರಕ್ಷಿದಿ ಹತ್ತಿರದ ತಿರುವಿನಲ್ಲಿ ನಿಂತಿದ್ದಾಗ ಹಾನುಬಾಳು ಕಡೆಯಿಂದ ಕಿರಣ್ ಬಂದಿದ್ದಾನೆ. ಸೀಟ್ ಬೆಲ್ಟ್ ಧರಿಸದೆ ಇದ್ದುದರಿಂದ ವಾಹನ ನಿಲ್ಲಿಸಲು ಸೂಚಿಸಿದಾಗ ಮೈಮೇಲೆ ಕಾರು ಹತ್ತಿಸಲು ಪ್ರಯತ್ನಿಸಿದ್ದಾನೆ. ಅಪಾಯದಿಂದ ಸಿಬ್ಬಂದಿ ಪಾರಾಗಿದ್ದಾರೆ. ನಂತರ ಸ್ವಲ್ಪ ದೂರ ಹೋಗಿ ಕಾರು ನಿಲ್ಲಿಸಿದಾಗ ಪೊಲೀಸ್ ಸಿಬ್ಬಂದಿ ಅಲ್ಲಿಗೆ ಓಡಿ ಬಂದರಾದರೂ ಎಲ್ಲರನ್ನೂ ತಳ್ಳಿ ಅಲ್ಲಿಂದ ಓಡಿದ್ದಾನೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಮೇ-19

1536: ಇಂಗ್ಲೆಂಡ್‌ನ ರಾಜ ಹೆನ್ರಿ 8ರ ಪತ್ನಿ ಆನ್ ಬೊಲಿನ್ ಅವರನ್ನು ದೇಶದ್ರೋಹ ಆರೋಪದಡಿ ಗಲ್ಲಿಗೇರಿಸಲಾಯಿತು.

1910: ಭೂಮಿಯು ಪ್ರಸಿದ್ಧ ಹಾಲಿಯ ಧೂಮಕೇತು ಹಾದುಹೋಗುವ ಅಪರೂಪದ ದೃಶ್ಯವನ್ನು ಕಂಡಿತು.

1961: ಸೋವಿಯತ್ ಒಕ್ಕೂಟದ ಅಂತರಿಕ್ಷ ಯಾತ್ರಿಕ ಯೂರಿ ಗಗರಿನ್ ಭಾರತಕ್ಕೆ ಭೇಟಿ ನೀಡಿದರು.

1971: ಸೋವಿಯತ್ ಒಕ್ಕೂಟವು ಮಾರ್ಸ್2 ಯಾನವನ್ನು ಮಂಗಳ ಗ್ರಹ ಅಧ್ಯಯನಕ್ಕಾಗಿ ಉಡಾಯಿಸಿತು.

1974: ಭಾರತದ ಮೊದಲ ಅಣುಪರೀಕ್ಷೆ ಸ್ಮೈಲಿಂಗ್ ಬುದ್ಧ ಯಶಸ್ವಿಯಾದ ನಂತರ ದೇಶಾದ್ಯಂತ ಅದರ ಪರಿಣಾಮಗಳ ಕುರಿತು ಚರ್ಚೆಗಳು ಮುಂದುವರಿದವು.

1991: ಭಾರತದ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಚುನಾವಣಾ ಪ್ರಚಾರ ಚಟುವಟಿಕೆಗಳು ತೀವ್ರಗೊಂಡಿದ್ದವು.

2004: ಭಾರತೀಯ ಕ್ರಿಕೆಟ್ ದಿಗ್ಗಜ ಸಚಿನ್ ತೆಂಡೂಲ್ಕರ್ ಟೆಸ್ಟ್ ಕ್ರಿಕೆಟ್‌ನಲ್ಲಿ ಮತ್ತೊಂದು ಮಹತ್ವದ ಸಾಧನೆ ದಾಖಲಿಸಿದರು.

### ಜನನ

1925: ಅಮೆರಿಕದ ಹೋರಾಟಗಾರ ಹಾಗೂ ಮಾನವ ಹಕ್ಕುಗಳ ನಾಯಕ ಮಾಲ್ಕಮ್ ಎಕ್ಸ್

1957: ಭಾರತೀಯ ನಟ ಮುಕೇಶ್ ಖನ್ನಾ

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248